**ಹೆಚ್ಚುವರಿ ಸಿವಿಲ್ ಜಡ್ಜ ಮತ್ತು ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಭಟ್ಕಳ.**

**ಸಿ. ಸಿ. ನಂಬರಃ 2050/2025**

**ಫಿರ್ಯಾದುದಾರರು** ದಯಾನಂದ ತಂದೆಃ ಮಂಜುನಾಥ ನಾಯ್ಕ

**– ವಿರುದ್ಧ –**

**ಆರೋಪಿತರು** ರಾಘವೇಂದ್ರ ತಂದೆಃ ನಾಗಪ್ಪ ನಾಯ್ಕ
ವಯಸ್ಸುಃ 29 ವರ್ಷ,
ಸಾಃ ನಂ. 232, ಹಾಲಮನೆ, ಮುಟ್ಟಳ್ಳಿ ಅಂಚೆ,
ಭಟ್ಕಳ ತಾಲೂಕು, ಉತ್ತರ ಕನ್ನಡ ಜಿಲ್ಲೆ.

**ಆಪಾದನೆ**

ಆರೋಪಿಯಾದ ನೀವು ಮತ್ತು ಪಿರ್ಯಾದಿದಾರರು ಸ್ನೇಹಿತರಿದ್ದು, ನೀವು ಧರ್ಮಸ್ಥಳ ಮತ್ತು ಇತರ ಧಾರ್ಮಿಕ ಕ್ಷೇತ್ರಗಳಿಗೆ ಹೋಗಲು ದಿನಾಂಕಃ 24-07-2024 ರಂದು ರೂ. 60,000/- (ರೂಪಾಯಿ ಆರವತ್ತು ಸಾವಿರ ಮಾತ್ರ) ಸಾಲವಾಗಿ ಪಡೆದುಕೊಂಡಿದ್ದು, ಅದನ್ನು ಆರು ತಿಂಗಳ ಅವಧಿಯೊಳಗೆ ಮರುಪಾವತಿಸುತ್ತೇನೆಂದು ಭರವಸೆ ನೀಡಿರುತ್ತೀರಿ. ದಿನಾಂಕಃ 24-02-2025 ರಂದು ನೀವು ರೂ. 3,000/- (ರೂ. ಮೂರು ಸಾವಿರ ಮಾತ್ರ) ನ್ನು ನಗದು ರೂಪದಲ್ಲಿ ಫಿರ್ಯಾದುದಾರರಿಗೆ ಪಾವತಿಸಿ, ಉಳಿಕೆ ಮೊತ್ತ ರೂ. 57,000/- (ರೂಪಾಯಿ ಐವತ್ತೇಳು ಸಾವಿರ ಮಾತ್ರ) ಕ್ಕೆ ಕೆನರಾ ಬ್ಯಾಂಕ್, ಭಟ್ಕಳ ಶಾಖೆಯ ಚೆಕ್ ನಂ. 188642 ನ್ನು ರೂ. 57,000/- (ರೂಪಾಯಿ ಐವತ್ತೇಳು ಸಾವಿರ ಮಾತ್ರ) ಕ್ಕೆ ದಿನಾಂಕಃ 22-04-2025 ನಮೂದಿಸಿ ಫಿರ್ಯಾದಿದಾರರಿಗೆ ನೀಡಿರುತ್ತೀರಿ. ಸದ್ರಿ ಚೆಕ್ಕನ್ನು ಫಿರ್ಯಾದಿದಾರರು ನಗದೀಕರಣಕ್ಕಾಗಿ ಅವರ ಬ್ಯಾಂಕಾದ ಬ್ಯಾಂಕ್ ಆಫ್ ಬರೋಡಾ, ಶಿರಾಲಿ ಶಾಖೆಯಲ್ಲಿ ಹಾಜರುಪಡಿಸಿದಾಗ, "Funds Insufficient" ಎಂಬ ಹಿಂಬರಹದೊಂದಿಗೆ ದಿನಾಂಕಃ 28-04-2025 ರಂದು ವಾಪಸ್ಸು ಬಂದಿರುತ್ತದೆ.

ನಂತರ ಫಿರ್ಯಾದಿದಾರರು ದಿನಾಂಕಃ 20-05-2025 ರಂದು ತಮ್ಮ ವಕೀಲರ ಮೂಲಕ ನೋಟಿಸ್ ನ್ನು ನಿಮಗೆ ನೀಡಿದ್ದು, ಸದ್ರಿ ನೋಟಿಸ್ ನೀಡಿ 15 ದಿನಗಳೊಳಗೆ ಚೆಕ್ಕನಲ್ಲಿ ನಮೂದಿಸಿದ ಹಣವನ್ನು ನೀಡುವಂತೆ ಸೂಚಿಸಿದ್ದು ಇರುತ್ತದೆ, ಸದ್ರಿ ನೋಟಿಸ್ಸನ್ನು ನೀವು ಸ್ವೀಕರಿಸದೇ ದಿನಾಂಕಃ 30-05-2025 ರಂದು

Unclaimed ಎಂದು ವಾಪಸ್ಸು ಬಂದಿದ್ದು, ಇಂದಿನವರೆಗೂ ಸಹ ನೀವು ಚೆಕ್ಕಿನ ಹಣವನ್ನು ಪಾವತಿ ಮಾಡದೆ ಆ ಮೂಲಕ ನೆಗೋಶಿಯೇಬಲ್ ಇನ್‌ಸ್ಟ್ರುಮೆಂಟ ಆಕ್ಟ ಕಲಂ 138 ರಡಿಯಲ್ಲಿ ಶಿಕ್ಷಾರ್ಹವಾದ ಅಪರಾಧವೆಸಗಿದ್ದೀರಿ ಎಂದು ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ಪ್ರಶ್ನೆ – ನಿಮ್ಮ ಮೇಲೆ ಹೊರಿಸಲಾದ ಆಪಾದನೆ ಕೇಳಿದ್ದೀರಾ? ಅದು ನಿಮಗೆ ತಿಳಿಯಿತೇ?

ಉತ್ತರ – ಹೌದು.

ಪ್ರಶ್ನೆ – ನೀವು ಸದ್ರಿ ಆಪಾದನೆಯನ್ನು ಒಪ್ಪಿಕೊಳ್ಳುತ್ತೀರಾ? ಅಥವಾ ನಿಮ್ಮ ವಿರುದ್ಧ ವಿಚಾರಣೆ ನಡೆಯಬೇಕೇ?

ಉತ್ತರ – ಇಲ್ಲ, ವಿಚಾರಣೆಯಾಗಬೇಕು.

(ಮೇಲಿನ ಆಪಾದನೆಯನ್ನು ಆಪಾದಿತನಿಗೆ ತಿಳಿದಿರುವ ಭಾಷೆಯಲ್ಲಿ ಓದಿ, ತಿಳಿಸಿ ಹೇಳಿ ಅವರು ನೀಡಿದ ಉತ್ತರವನ್ನು ಯಥಾರೀತಿ ಬರೆದುಕೊಂಡಿರುವುದಾಗಿ ಈ ಮೂಲಕ ದೃಢೀಕರಿಸಲಾಗಿದೆ.

**ಸಹಿ ಇದೆ/–**

**(ಶ್ರೀಮತಿ.ಧನವತಿ)**

ಹೆಚ್ಚುವರಿ ಸಿವಿಲ್ ಜಡ್ಜ ಮತ್ತು

ದಿನಾಂಕಃ 19–11–2025. ನ್ಯಾಯಿಕ ದಂಡಾಧಿಕಾರಿ, ಭಟ್ಕಳ.